(ರೂ. ಲಕ್ಷಗಳಲ್ಲಿ)

ಕ್ರ.ಸಂ.	ಅಣೆಕಟ್ಟೆ ನಾಲೆ		2011–12ನೇ ಸಾಲಿನಲ್ಲಿ ನೀಡಿರುವ ಅನುದಾನ
1.	ದೇವರಾಯ	...	1000.00
2.	ಚಿಕ್ಕದೇವರಾಯ ಸಾಗರ (ಸಿ.ಡಿ.ಎಸ್.)	...	1200.00
3.	ವಿರಿಜಾ	...	700.00
4.	ಎಲ್.ಬಿ.ಎಲ್.ಎಲ್.	...	45.00
		ಒಟ್ಟು	2945.00

ಸದರಿ ಕಾಮಗಾರಿಗಳನ್ನು ತೆಗೆದುಕೊಂಡ ಅವಧಿಯಿಂದ ಎರಡು ವರ್ಷಗಳಲ್ಲಿ ಪೂರ್ಣಗೊಳಿಸಲು ಉದ್ದೇಶಿಸಲಾಗಿದೆ.

ಬೇಲೂರು I. T. I. ಕಾಲೇಜು

ಶ್ರೀ ರವಿಸುಬ್ರಮಣ್ಯ ಎಲ್. ಎ. (ಬಸವನಗುಡಿ):–

421 (676) ಮಾನ್ಯ ಅರಣ್ಯ ಸಚಿವರು ಈ ಕೆಳಕಂಡ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಆಹಾರವನ್ನರಸಿ ಕಾಡಾನೆಗಳು ನಗರ ಪ್ರದೇಶಕ್ಕೆ ವಲಸೆ ಬಂದು ದಾಳಿಯಿಡುತ್ತಿರುವುದನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳೇನು;

(ಆ) ಕಾಡಾನೆಗಳಿಗೆ ಅರಣ್ಯದಲ್ಲಿಯೇ ಆಹಾರ ಲಭ್ಯವಾಗುವಂತೆ ಯಾವ ಕ್ರಮಗಳನ್ನು ಕೈಗೊಳ್ಳಲಾಗುವುದು?

ಶ್ರೀ ಸಿ. ಪಿ. ಯೋಗೇಶ್ವರ (ಮಾನ್ಯ ಅರಣ್ಯ ಸಚಿವರು):–

(ಅ) ಕಾಡಾನೆಗಳ ಹಾವಳಿಯನ್ನು ತಡೆಗಟ್ಟಲು ಸರ್ಕಾರ ಕೈಗೊಳ್ಳುತ್ತಿರುವ ಕ್ರಮಗಳು ಈ ಕೆಳಗಿನಂತಿದೆ.

1. ಕಾಡಾನೆಗಳು ಅರಣ್ಯ ಪ್ರದೇಶದ ಪಕ್ಕದ ಕೃಷಿ ಹಾಗೂ ಸಾರ್ವಜನಿಕರ ಸ್ಥಳಗಳಲ್ಲಿ ದಾಳಿ ಮಾಡುವುದನ್ನು ತಡೆಗಟ್ಟುವ ಸಲುವಾಗಿ ಸೂಕ್ಷ್ಮ ಪ್ರದೇಶಗಳ ಅರಣ್ಯದ ಅಂಚಿನಲ್ಲಿ ಕಾಡಾನೆ ನಿರೋಧ ಕಂದಕ ಮತ್ತು ಸೋಲಾರ್ ಬೇಲಿ ನಿರ್ಮಿಸಿ ನಿರ್ವಹಿಸಲಾಗುತ್ತಿದೆ.
2. ಕಾಡಾನೆಗಳೂ ಪದೇ ಪದೇ ಕೃಷಿ ಜಮೀನುಗಳಿಗೆ ದಾಳಿ ಮಾಡುವ ಸೂಕ್ಷ್ಮ ಸ್ಥಳಗಳನ್ನು ಗುರುತಿಸಿ ಹಾವಳಿ ನಡೆಸುವ ಕಾಡಾನೆಗಳನ್ನು ಪುನಃ ಕಾಡಿಗೆ

ಓಡಿಸುವ ಸಲುವಾಗಿ ಕಾಡಾನೆ ತಡೆ ಕ್ಯಾಂಪುಗಳನ್ನು ಸ್ಥಾಪಿಸಿ, ಪ್ರತಿಯೊಂದು ಕ್ಯಾಂಪಿನಲ್ಲೂ ಸ್ಥಳೀಯರ ಜೊತೆಗೆ ನಾಲ್ಕು ಮಂದಿ ನುರಿತ ಅರಣ್ಯ ಸಿಬ್ಬಂದಿಗಳನ್ನು ನಿಯೋಜಿಸಿ ಕ್ರಮಕೈಗೊಳ್ಳಲಾಗಿದೆ.

3. ಕಾಡಾನೆಗಳನ್ನು ಅರಣ್ಯ ಪ್ರದೇಶಗಳಿಗೆ ಹಿಮ್ಮೆಟ್ಟಿಸಲು ಸಿಬ್ಬಂದಿಗಳಿಗೆ ಪಟಾಕಿ, ವಾಕಿ-ಟಾಕಿ, ಗನ್ ಹಾಗೂ ವಾಹನಗಳ ಸೌಲಭ್ಯಗಳನ್ನು ಒದಗಿಸಲಾಗಿದೆ.

4. ಸಾರ್ವಜನಿಕರ ಆಸ್ತಿ ಪಾಸ್ತಿಗಳಿಗೆ ಹಾಗೂ ಮಾನವ ಸಾವಿಗೆ ಕಾರಣವಾಗಿರುವ ಪುಂಡ ಕಾಡಾನೆಗಳನ್ನು ಗುರುತಿಸಿ ಅವುಗಳನ್ನು ಹಿಡಿದು ಅವುಗಳನ್ನು ಸ್ಥಳಾಂತರಿಸಲು ಕ್ರಮ ಕೈಗೊಳ್ಳಲಾಗಿದೆ.

(ಆ) ಕಾಡಾನೆಗಳಿಗೆ ಅರಣ್ಯದಲ್ಲೆಯೇ ಆಹಾರ ಲಭ್ಯವಾಗುವ ಸಂಬಂಧ ಈ ಕೆಳಕಂಡ ಪ್ರಮುಖ ಕ್ರಮಗಳನ್ನು ಕೈಗೊಂಡಿದೆ.

1. ವಿವಿಧ ಅರಣ್ಯ ಪ್ರದೇಶಗಳಲ್ಲಿ ಈಗಾಗಲೇ ಬಿದಿರು ಹೂ ಬಿಟ್ಟಿದ್ದು. ಪುನರುತ್ಪತ್ತಿ ಕಾರ್ಯವು ಆಗುತ್ತಿದೆ. ಇನ್ನೂ ಕೆಲವು ಪ್ರದೇಶಗಳಲ್ಲಿ ಪುನರುತ್ಪತ್ತಿ ಕಾರ್ಯಕ್ಕಾಗಿ ಕ್ರಮ ಕೈಗೊಳ್ಳಲಾಗುತ್ತಿದೆ.

2. ಅರಣ್ಯ ಪ್ರದೇಶಗಳಲ್ಲಿ ವನ್ಯಪ್ರಾಣಿಗಳಿಗೆ ವರ್ಷವಿಡೀ ಕುಡಿಯುವ ನೀರು ದೊರಕುವಂತೆ ಅರಣ್ಯದಲಿರುವ ಕೆರೆಗಳ ಹೂಳುತೆಗೆಯುವುದು. ಗಲ್ಲಿಪ್ಲಗ್, ಚೆಕ್ ಡ್ಯಾಮ್, ನಾಲಾಬಂಡಿಂಗ್ ಇತ್ಯಾದಿ ಕೆಲಸಗಳನ್ನು ಸಹ ರಕ್ಷಿತಾರಣ್ಯಗಳಲ್ಲಿ ಕೈಗೊಳ್ಳಲಾಗಿದೆ. ಕಾಡಿನಲ್ಲಿ ಹೆಸರಿನ ಪ್ರಮಾಣ ಹೆಚ್ಚು ಮಾಡಲಾಗುತ್ತಿದೆ.

3. ಆನೆಗಳು ಒಂದು ಅರಣ್ಯ ಪ್ರದೇಶದಿಂದ ಇನ್ನೊಂದು ಪ್ರದೇಶಕ್ಕೆ ಹೋಗಲು ಎಲ್ಲಾ ರೀತಿಯ ಪ್ರಯತ್ನವನ್ನು ಕೈಗೊಳ್ಳಲಾಗುತ್ತಿದೆ. ಆದಾಗ್ಯೂ ಈ ಕಾರ್ಯವು ಹೆಚ್ಚಿನ ಮಟ್ಟದಲ್ಲಿ ಫಲಕಾರಿಯಾಗಿರುವುದಿಲ್ಲ.

ಹೊಯ್ಸಳ ಉತ್ಸವ

ಶ್ರೀ ರುದ್ರೇಶಗೌಡ ವೈ.ಎನ್. (ಬೇಲೂರು):-

422 (585) ಮಾನ್ಯ ಸಣ್ಣ ನೀರಾವರಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ಕೆಳಕಂಡ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಹಾಸನ ಜಿಲ್ಲೆಯಲ್ಲಿ ಈ ಹಿಂದೆ ಹೊಯ್ಸಳ ಉತ್ಸವ ನಡೆಸಿರುವುದು ನಿಜವೇ;